**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.10/2021**

ಪಿ.ಡಬ್ಲ್ಯೂ: 4

ಸಿ.ಡಬ್ಲ್ಯೂ: 5

ಸಾಕ್ಷಿದಾರರ ಹೆಸರು : ಪಾರ್ವತಿ

ಗಂಡನ ಹೆಸರು: :ಬಸವರಾಜ

ವಯಸ್ಸು : **27 ವರ್ಷ**

ಉದ್ಯೋಗ : ಗೃಹಿಣಿ

ವಾಸಸ್ಥಳ : ಸಿದ್ದರಹಳ್ಳಿ

**ದಿನಾಂಕ: 09-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ಐದು ವರ್ಷಗಳ ಹಿಂದೆ ನಾನು ಸಿದ್ದರಹಳ್ಳಿ ಗ್ರಾಮದಲ್ಲಿ ನಾರಾಯಣಸ್ವಾಮಿರವರ ಜಮೀನಿಗೆ ಹೋಗಿದ್ದೆ. ಬೆಳಿಗ್ಗೆ 11-00 ಗಂಟೆ ಸಮಯದಲ್ಲಿ ನಾವು ಹೋಗುವಷ್ಟರಲ್ಲಿ ಚಾಸಾ-4 ಮತ್ತು ಆರೋಪಿ ಅಣ್ಣತಮ್ಮಂದಿರು ಆಗಿದ್ದು, ಜಗಳವಾಡುತ್ತಿದ್ದರು. ಚಾಸಾ-4 ಮತ್ತು ಆರೋಪಿ ಒಬ್ಬರಿಗೊಬ್ಬರು ಹಿಡಿದು ಹೊಡೆದಾಡಿಕೊಳ್ಳುತ್ತಿದ್ದರು. ಅವರು ಏಕೆ ಜಗಳವಾಡುತ್ತಿದ್ದರು ಎಂದು ನನಗೆ ತಿಳಿದಿರುವುದಿಲ್ಲ. ಈ ಪ್ರಕರಣದ ಸಂಬಂಧ ನನಗೆ ಬೇರೆನೂ ತಿಳಿದಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ: **29-06-2020** ರಂದು ಬೆಳಿಗ್ಗೆ **11-00** ಗಂಟೆ ಸಮಯದಲ್ಲಿ ಹುಲಿತಿಮ್ಮಾಪುರ ಗ್ರಾಮದ ಸರ್ವೆ ನಂ.**39** ರಲ್ಲಿ ಚಾಸಾ-**4** ರವರ ಜಮೀನಿಗೆ ಆಲೂಗೆಡ್ಡೆ ಹಾಕಲು ಕೂಲಿ ಕೆಲಸಕ್ಕೆ ಹೋಗಿರುತ್ತೇವೆ ಎಂದರೆ ಸರಿ. ಆಗ ಟ್ರಾಕ್ಟರ್ ನಲ್ಲಿ ಉಳುಮೆ ಮಾಡುತ್ತಿದ್ದಾಗ ಆರೋಪಿ ಅತಿಕ್ರಮ ಪ್ರವೇಶ ಮಾಡಿ ಗಲಾಟೆ ಮಾಡಿರುತ್ತಾರೆಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ಆರೋಪಿತರು ಚಾಸಾ-**1** ರವರ ಮೇಲೆ ಹಲ್ಲೆ ಮಾಡಿ ಕಲ್ಲಿನಿಂದ ಹೊಡೆದು ಹಿಡಿದು ಎಳೆದಾಡಿ ಅವಮಾನ ಮಾಡಿ ಅವಾಚ್ಯ ಶಬ್ದಗಳಿಂದ ಬೈದು ಪ್ರಾಣ ಬೆದರಿಕೆ ಹಾಕಿರುತ್ತಾರೆಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ.

ದಿನಾಂಕಃ29-06-2020 ರಂದು - - - - - ಪುನಃ ನೋಡಿದರೆ ಗುರುತಿಸುತ್ತೇನೆಂದು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯ ಅಲ್ಲಗೆಳೆದ ಹೇಳಿಕೆ ಭಾಗವನ್ನು ನಿಪಿ-5 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.</u>**

ಪಾಟೀ ಸವಾಲು ಇಲ್ಲ

**ಮರುವಿಚಾರಣೆಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**